ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

3

ಇಲಾಖೆ / ವಿಷಯ : DEPARTMENT / SUBJECT: ನೀರಾವರಿ (ಕೃಷ್ಣಾ ಮಹದಾಯಿ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 11/10/2020

# ಕೃಷ್ಣಾ, ಮಹದಾಯಿ ಯೋಜನೆಗೆ ಬದ್ಧ ಎಂದ ಸಚಿವ ಜಾರಕಿಹೊಳಿ

**ಬೆಂಗಳೂರು:** ಕೃಷ್ಣಾ ಮಹದಾಯಿ ಯೋಜನೆ ವಿಚಾರದಲ್ಲಿ ತೆಲಂಗಾಣ, ಗೋವಾ ರಾಜ್ಯಗಳು ಅನಗತ್ಯ ವಿವಾದ ಸೃಷ್ಟಿಸಲು ಹೊರಟಿವೆ. ಇದರಿಂದ ರಾಜ್ಯಕ್ಕೆ ಅನ್ಯಾಯವಾಗಲು ಬಿಡುವುದಿಲ್ಲ. ಈ ನಿಟ್ಟಿನಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಸಮರ್ಥ ವಾದ ಮಂಡಿಸಲಾಗುವುದು ಎಂದು ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ತಿಳಿಸಿದ್ದಾರೆ.



ಈ ಸಂಬಂಧ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರೊಂದಿಗೆ ದೂರವಾಣಿಯಲ್ಲಿ ಜಾರಕಿಹೊಳಿ ಮಾತುಕತೆ ನಡೆಸಿದರು. ಬಳಿಕ ಮಾಧ್ಯಮಕ್ಕೆ ವಿವರ ನೀಡಿದ ಅವರು, ''ಕೃಷ್ಣಾನದಿ ನೀರು ಹಂಚಿಕೆ ವಿಚಾರದಲ್ಲಿ ತೆಲಂಗಾಣ ಸರಕಾರ ಹೊಸ ತಗಾದೆ ತೆಗೆದಿದೆ. ಕೃಷ್ಣಾ ತೀರ್ಪಿನ ಸಂಬಂಧದಲ್ಲಿ ಅಧಿಸೂಚನೆ ಹೊರಬೀಳುವ ಹಂತದಲ್ಲಿದೆ. ಹಾಗಾಗಿ ಹೊಸ ನ್ಯಾಯಾಧಿಕರಣ ಸ್ಥಾಪಿಸಬೇಕು ಎನ್ನುವ ತೆಲಂಗಾಣದ ವಾದ ಅತಾರ್ಕಿಕ. ಈ ವಿಷಯದಲ್ಲಿ ತೆಲಂಗಾಣ ಮತ್ತು ಆಂಧ್ರ ಪ್ರದೇಶ ಸರಕಾರಗಳು ತಮಗೆ ಹಂಚಿಕೆಯಾದ ನೀರಿನ ಪಾಲಿನಲ್ಲಿ ಉಪಯೋಗ ಮಾಡಿಕೊಳ್ಳಬೇಕು,'' ಎಂದರು.

''ಮಹದಾಯಿ ವಿಚಾರದಲ್ಲಿ ಗೋವಾ ಸಿಎಂ ಬಿಡುಗಡೆ ಮಾಡಿರುವ ಫೋಟೊ, ವಿಡಿಯೊ ಅವರೇ ಸೃಷ್ಟಿಸಿದ್ದವಾಗಿವೆ. ಇಂತಹ ನಕಲಿ ದಾಖಲೆಗಳನ್ನು ಸುಪ್ರೀಂಕೋರ್ಟ್ ಕೂಡ ನಂಬುವುದಿಲ್ಲ. ಮಹದಾಯಿ ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಇದರ ಜಾರಿಗೆ ಬದ್ಧ. ಈ ಬಗ್ಗೆ ಸಿಎಂ ಬಿ.ಎಸ್.ಯಡಿಯೂರಪ್ಪ ಅವರೇ ಕೇಂದ್ರ ಜಲಶಕ್ತಿ ಸಚಿವರಿಗೆ ಪತ್ರ ಬರೆದಿದ್ದಾರೆ,'' ಎಂದು ಹೇಳಿದ್ದಾರೆ.